ಎಂ.ವಿ.ಸಿ. ನಂ.82/2023 ರಲ್ಲಿ
ಪಿ.ಡಬ್ಲ್ಯೂ-1(ಶಂಭುಲಿಂಗೇಗೌಡ)

ದಿನಾಂಕ 12.01.2024 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ-

ಕೃತ್ಯ ಸ್ಥಳದ ಪಂಚನಾಮೆಯ ಯಥಾ ನಕಲನ್ನು ನಿಪಿ-4, ಕೃತ್ಯ ಸ್ಥಳದ ಕಚ್ಚಾ ನಕ್ಷೆಯ ಯಥಾ ನಕಲನ್ನು ನಿಪಿ-5, ಐ.ಎಂ.ವಿ ವರದಿಯ ಯಥಾ ನಕಲನ್ನು ನಿಪಿ-6, ಪಿ.ಎಂ ವರದಿಯ ಯಥಾ ನಕಲನ್ನು ನಿಪಿ-7, ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ನಿಪಿ-8, 73 ವೈದ್ಯಕೀಯ ಬಿಲ್ಲುಗಳನ್ನು ಒಟ್ಟಾಗಿ ನಿಪಿ-9, ನನ್ನ ತಾಯಿ, ನನ್ನ ಹಾಗೂ ನನ್ನ ತಂದೆಯ ಆಧಾರ್ ಕಾರ್ಡ್‌ಗಳ ನೋಟರೈಸ್ಡ್ ಪ್ರತಿಗಳನ್ನು ಕ್ರಮವಾಗಿ ನಿಪಿ-10 ರಿಂದ ನಿಪಿ-12 ಎಂದು ಗುರುತಿಸಲಾಯಿತು. ಅರ್ಜಿಯನ್ನು ಪುರಸ್ಕರಿಸುವಂತೆ ಕೋರುತ್ತೇನೆ.

ನಿಪಿ-10 ರಿಂದ ನಿಪಿ-12 ರ ಮೂಲ ದಾಖಲೆಗಳನ್ನು ಸಾಕ್ಷಿದಾರರು ಹಾಜರುಪಡಿಸಿದ್ದು, ನಿಪಿ-10 ರಿಂದ ನಿಪಿ-12 ನ್ನು ಮೂಲ ದಾಖಲೆಗಳೊಂದಿಗೆ ತಾಳೆ ನೋಡಿ ಮೂಲ ದಾಖಲೆಗಳು ಸಾಕ್ಷಿದಾರರ ದೈನಂದಿಕ ಕಾರ್ಯಗಳಿಗೆ ಅವಶ್ಯಕತೆ ಇದೆ ಎಂದು ಹೇಳಿದ ಕಾರಣ ಮೂಲ ದಾಖಲೆಗಳನ್ನು ಅವಶ್ಯಕತೆ ಇದ್ದ ಪಕ್ಷದಲ್ಲಿ ಹಾಜರುಪಡಿಸುವ ಷರತ್ತಿಗೊಳಪಡಿಸಿ ಸಾಕ್ಷಿದಾರರಿಗೆ ಹಿಂದಿರುಗಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯ ಮಂಡಳಿಯ
ಪೀಠಾಧಿಕಾರಿಗಳು.